ಪ-72
40

72

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರಾಣೇಶ್ ಎಂ.ಕೆ. ಇವರು ನಿಯಮ ~~330~~ ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ.**

**ವಿಷಯ: ಸಾರ್ವಜನಿಕ ಗ್ರಂಥಾಲಯ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಗ್ರಂಥಾಲಯಗಳಲ್ಲಿ ಗ್ರಂಥಪಾಲಕರಾಗಿ ಕಳೆದ 30 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಸುಮಾರು 6500 ನೌಕರರುಗಳಿಗೆ ಸರ್ಕಾರದ ನಿಯಮಾನುಸಾರ ಕನಿಷ್ಠ ವೇತನವನ್ನು ನೀಡದೆ ಇರುವುದರಿಂದ ಇವರುಗಳ ಜೀವನೋಪಾಯಕ್ಕೆ ತುಂಬಾ ತೊಂದರೆ ಆಗಿರುತ್ತದೆ. ಆದ ಕಾರಣ ಸದರಿ ನೌಕರರನ್ನು ಕನಿಷ್ಠ ವೇತನ ವ್ಯಾಪ್ತಿಗೆ ಒಳಪಡಿಸುವ ಬಗ್ಗೆ.**

**ಉತ್ತರ:** ಪ್ರಸ್ತುತ ಗ್ರಾಮ ಪಂಚಾಯತಿ ಗ್ರಂಥಾಲಯ ಮೇಲ್ವಿಚಾರಕರಿಗೆ ಮಾಸಿಕವಾಗಿ ರೂ.7,000/- ಗೌರವಧನ ನೀಡಲಾಗುತ್ತಿದೆ. ಗ್ರಾಮ ಪಂಚಾಯತಿ ಗ್ರಂಥಾಲಯ ನೌಕರರಿಗೆ ಮಾಸಿಕವಾಗಿ ಕನಿಷ್ಠ ವೇತನ ರೂ.13,200/- ಪಾವತಿಸುವ ಬಗ್ಗೆ ಆರ್ಥಿಕ ಇಲಾಖೆಯ ಸಹಮತಿಗಾಗಿ ಕಳುಹಿಸಲಾಗಿತ್ತು. ಪ್ರಸ್ತುತ ನೀಡಲಾಗುತ್ತಿರುವ ಗೌರವ ಸಂಭಾವನೆಯನ್ನು ಕಾರ್ಮಿಕ ಇಲಾಖೆಯ ಕನಿಷ್ಠ ವೇತನಕ್ಕೆ ಹೋಲಿಸಲು ಸಾಧ್ಯವಿಲ್ಲ, ಇದು ಗೌರವ ಸಂಭಾವನೆ ಹಾಗೂ ಕನಿಷ್ಠ ವೇತನವು ಸಂಪೂರ್ಣ ದಿನದ (8 ಗಂಟೆಗಳ ಕಾಲ) ಕಾರ್ಯಕ್ಕೆ ಇರುತ್ತದೆ. ಗ್ರಂಥಾಲಯ ಮೇಲ್ವಿಚಾರಕರು ಗೌರವ ಸಂಭಾವನೆ ಮೇರೆಗೆ 4 ಗಂಟೆಗಳ ಕಾಲ ಕೆಲಸ ಮಾಡುತ್ತಿರುವುದರಿಂದ ಇದನ್ನು ಕಾರ್ಮಿಕ ನೀತಿಯಲ್ಲಿ ತರಲು ಸಾಧ್ಯವಿಲ್ಲವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ಅಭಿಪ್ರಾಯ ನೀಡಿರುತ್ತಾರೆ.

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.

ಸಂಖ್ಯೆ. ಗ್ರಾಅಪ 244 ಗ್ರಾಪಂಅ 2020.